## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಟಿ. ಮುರುಡಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮಾಗಡಿ ಇವರ ವಿರುದ್ಧದ ಆರೋಪಗಳ ಕುರಿತು ಇಲಾಖಾ ವಿಚಾರಣೆ ನಡೆಸಿರುವ ಶ್ರೀ ಬಿ.ವಿ. ಪ್ರಕಾಶ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು, ಬೆಂಗಳೂರು ಇವರಿಗೆ ಸಂಚಿತ ಸಂಭಾವನೆ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 98 ವಿಸೇಬಿ 2018, ದಿನಾಂಕ: 03.04.2021.
2) ಶ್ರೀ ಬಿ.ವಿ. ಪ್ರಕಾಶ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು, ಬೆಂಗಳೂರು ಇವರ ದಿನಾಂಕ: 25.03.2022ರ ವಿಚಾರಣಾ ವರದಿ.

*****

**ಪ್ರಸ್ತಾವನೆ:**

ಶ್ರೀ ಮುರುಡಯ್ಯ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ, ಇವರು ಈ ಹಿಂದೆ ಮಾಗಡಿ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಶ್ರೀ ಗಿರಿಪುರ ಗ್ರಾಮ ಪಂಚಾಯಿತಿಯಲ್ಲಿ ಶ್ರೀಮತಿ ಅಶ್ವತ್ಥಲಕ್ಷ್ಮಮ್ಮ ಇವರಿಗೆ ಸೇರಿದ 19.35 ಎಕರೆ ಜಮೀನಿನಲ್ಲಿ ರಚಿಸಲಾದ ಅಕ್ರಮ ಬಡಾವಣೆಯ 438 ನಿವೇಶನಗಳಿಗೆ ಕಾನೂನುಬಾಹಿರವಾಗಿ ನಮೂನೆ 11ಬಿ ವಿತರಿಸುವ ಮೂಲಕ ಕರ್ತವ್ಯಲೋಪವೆಸಗಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುತ್ತಾರೆಂಬ ಆರೋಪಗಳಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರನ್ವಯ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ-11(2)ರ ಪ್ರಕಾರ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 03.04.2021ರ ಸರ್ಕಾರದ ಆದೇಶದಲ್ಲಿ, ಶ್ರೀ ಬಿ.ವಿ. ಪ್ರಕಾಶ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು, ಅದರಂತೆ, ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕೈಗೊಂಡು, ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:25.03.2022ರ ವಿಚಾರಣಾ ವರದಿಯನ್ನು ಶಿಸ್ತು ಪ್ರಾಧಿಕಾರವಾದ ಸರ್ಕಾರಕ್ಕೆ ಸಲ್ಲಿಸಿ, ಇಲಾಖಾ ವಿಚಾರಣೆಯ ನಿಗದಿತ ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಯವರಿಗೆ ಅವರ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 9 ವಿಸೇಬಿ 2022 ಬೆಂಗಳೂರು, ದಿನಾಂಕ: 10.06.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಬಿ.ವಿ. ಪ್ರಕಾಶ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿ, ಇವರಿಗೆ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 11 ಸೇಇವಿ 2019, ದಿನಾಂಕ: 24.04.2019ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ.30,000/- (ರೂ. ಮೂವತ್ತು ಸಾವಿರಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

..2

ಶ್ರೀ ಬಿ.ವಿ. ಪ್ರಕಾಶ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸದರಿ ಸಂಭಾವನೆ ಮೊತ್ತವನ್ನು ಪಾವತಿಸುವ ಕುರಿತು ಕೂಡಲೇ ಅಗತ್ಯ ಕ್ರಮ ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

10/06/2022
(ಬಾಲಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

10/06/2022

ಇವರಿಗೆ,

1) ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ.
3) ಶ್ರೀ ಬಸವನಹಳ್ಳಿ ವೆಂಕಟಕೃಷ್ಣಯ್ಯ ಪ್ರಕಾಶ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮನೆ ನಂ.01, 09/02 ಓಂ ಅಪಾರ್ಟ್‌ಮೆಂಟ್, 3ನೇ ಮುಖ್ಯ ರಸ್ತೆ, 17ನೇ ಅಡ್ಡ (ಉಪ) ರಸ್ತೆ, (ಮಾರ್ಗೋಸ ರಸ್ತೆ), ಮಲ್ಲೇಶ್ವರಂ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಮೇಲ್ವಿಚಾರಕರು ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

*****